ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

4

ಇಲಾಖೆ / ವಿಷಯ : DEPARTMENT / SUBJECT: ಮುಖ್ಯ ಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 13/4/21

# 18, 19ರಂದು ಸರ್ವಪಕ್ಷ ಸಭೆ

ಬೀದರ/ಮುದಗಲ್ಲ: ಕೊರೊನಾ 2ನೇ ಅಲೆ ನಿಯಂತ್ರಣಕ್ಕೆ ಸಕಲ ಕ್ರಮ ಕೈಗೊಳ್ಳಲಾಗಿದೆ. ಅಗತ್ಯ ಬಿದ್ದರೆ ಮಾತ್ರ ಇತರೆ ಜಿಲ್ಲೆಗಳಲ್ಲೂ ನೈಟ್ ಕರ್ಫ್ಯೂ ವಿಧಿಸಲಾಗುವುದು. ಯಾವುದೇ ಕಾರಣಕ್ಕೂ ಲಾಕ್‌ಡೌನ್ ಮಾಡುವುದಿಲ್ಲ. ಕೋವಿಡ್ ಹೆಚ್ಚಳ ಹಿನ್ನೆಲೆಯಲ್ಲಿ ಏ.18, 19ರಂದು ಮಹತ್ವದ ಸರ್ವಪಕ್ಷ ಸಭೆ ಕರೆಯಲಾಗಿದೆ ಎಂದು ಮುಖ್ಯಮಂತ್ರಿ ಯಡಿಯೂರಪ್ಪ ಹೇಳಿದರು.



ಬಸವಕಲ್ಯಾಣ ಮತ್ತು ಮುದಗಲ್ಲನಲ್ಲಿ ಸುದ್ದಿಗಾರರ ಜತೆ ಮಾತನಾಡಿ, ರಾಜ್ಯದಲ್ಲಿ ಲಕ್ಷಾಂತರ ಜನರ ಕೋವಿಡ್ ಪರೀಕ್ಷೆ ನಡೆಸಲಾಗಿದ್ದು, ಈ ವಿಷಯದಲ್ಲಿ ಪ್ರಧಾನಿ ಮೋದಿ ಅವರೇ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ವಿಪಕ್ಷಗಳಿಂದ ಟೀಕೆಗಳು .ಬರುವುದು ಸಹಜ. ಪಕ್ಷಭೇದ ಮರೆತು ಕೊರೊನಾ ತಡೆಗಟ್ಟಬೇಕಾಗಿದೆ. ಕೋವಿಡ್ ಹೆಚ್ಚಳ ಹಿನ್ನೆಲೆ ಏ.18, 19ರಂದು ಮಹತ್ವದ ಸಭೆ ಕರೆಯಲಾಗಿದ್ದು, ವಿಪಕ್ಷ ನಾಯಕರಾದ ಸಿದ್ದರಾಮಯ್ಯ, ಕುಮಾರಸ್ವಾಮಿ ಮತ್ತು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ ಅವರನ್ನು ಆಹ್ವಾನಿಸಲಾಗುವುದು ಎಂದರು.

ಕೋವಿಡ್-19 ಸೋಂಕು ನಿಯಂತ್ರಣಕ್ಕೆ ಅಗತ್ಯ ಬಿಗಿ ಕ್ರಮ ಕೈಗೊಳ್ಳುತ್ತಿದ್ದು, ಲಾಕ್‌ಡೌನ್ ಮಾಡುವ ಯಾವುದೇ ಚಿಂತನೆ ಸದ್ಯಕ್ಕೆ ಇಲ್ಲ. ಉದ್ಯೋಗ ಅರಸಿ ಬಂದ ಕೂಲಿ ಕಾರ್ಮಿಕರು ಯಾವುದೇ ಕಾರಣಕ್ಕೂ ಬೆಂಗಳೂರು, ಮಂಗಳೂರು ಸೇರಿದಂತೆ ವಿವಿಧ ಪಟ್ಟಣಗಳಿಂದ ತೆರಳುವ ಅವಶ್ಯಕತೆಯಿಲ್ಲ, ಆತಂಕವೂ ಬೇಡ.ಕೋವಿಡ್ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ವರದಿಯಾಗುತ್ತಿರುವ ರಾಜ್ಯದ 7 ಜಿಲ್ಲೆಗಳಲ್ಲಿ ರಾತ್ರಿ ಕರ್ಫ್ಯೂ ಜಾರಿ ಮಾಡಲಾಗಿದೆ. ಇತರೆ ಜಿಲ್ಲೆಗಳಲ್ಲಿಯೂ ಸೋಂಕಿತರು ಹೆಚ್ಚಾದರೆ ರಾತ್ರಿ ಕರ್ಫ್ಯೂ ವಿಸ್ತರಿಸುವುದು ಅನಿವಾರ್ಯವಾಗುತ್ತದೆ. ಜನರು ಜಾಗೃತಿ ವಹಿಸಿ, ಮಾಸ್ಕ್ ಮತ್ತು ಸಾಮಾಜಿಕ ಅಂತರ ಕಾಪಾಡಿ ನಿಯಂತ್ರಣಕ್ಕೆ ಸಹಕರಿಸಬೇಕು ಎಂದರು.

ಉವಾ 13/4/21

## ಕರ್ತವ್ಯಕ್ಕೆ ಹಾಜರಾಗದಿದ್ದರೆ ವೇತನ ಇಲ್ಲ: ಸಿಎಂ

ಬೀದರ: ಕರ್ತವ್ಯಕ್ಕೆ ಹಾಜರಾಗದ ಸಾರಿಗೆ ಸಿಬ್ಬಂದಿ ವೇತನ ಯಾವುದೇ ಕಾರಣಕ್ಕೂ ನೀಡುವುದಿಲ್ಲ. ಇನ್ನಷ್ಟು ಬಿಗಿಯಾದ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಖಡಕ್ ಎಚ್ಚರಿಕೆ ನೀಡಿದರು. ಬಸವಕಲ್ಯಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಸಾರಿಗೆ ನೌಕರರು ಗೌರವಯುತವಾಗಿ ಬಂದು ಬಸ್‌ಗಳನ್ನು ಓಡಿಸಬೇಕು. ಹಬ್ಬಗಳ ಸಮಯದಲ್ಲಿ ಪ್ರಯಾಣಿಕರಿಗೆ ತೊಂದರೆ ಕೊಡುವುದು ಸರಿಯಲ್ಲ. ಪ್ರತಿಭಟನೆ ಮಾಡುವವರ ವಿರುದ್ಧ ಕ್ರಮ ಅನಿವಾರ್ಯವಾಗುತ್ತದೆ. ಈಗಾಗಲೇ ಯಾರ ಮೇಲೆ ಏನು ಕ್ರಮ ತೆಗೆದುಕೊಳ್ಳಬೇಕೋ ಅದನ್ನು ಕೈಗೊಳ್ಳಲಾಗಿದೆ ಎಂದರು. ಯುಗಾದಿ ಸಂದರ್ಭದಲ್ಲಿ ಸಾರಿಗೆ ಇಲಾಖೆಗೆ ಸುಮಾರು 25 ಕೋಟಿ ಹಣ ಸಂಗ್ರಹವಾಗುತ್ತಿತ್ತು. ಆದರೆ ಅದು ಈಗ ನಿಗಮಗಳಿಗೆ ಬಹು ದೊಡ್ಡ ಹಾನಿಯಾಗಿದೆ. ಅದಕ್ಕೆ ಸಾರಿಗೆ ಇಲಾಖೆ ನೌಕರರೇ ಕಾರಣ. ಹಬ್ಬ ಹರಿದಿನಗಳನ್ನು ನೋಡಿ ಮುಷ್ಕರ ಆರಂಭಿಸಬೇಕಾಗಿತ್ತು. ಆದರೆ, ಸರ್ಕಾರ ಮಾತ್ರ ತನ್ನ ನಿರ್ಣಯದಿಂದ ಯಾವುದೇ ಕಾರಣಕ್ಕೂ ಹಿಂದೆ ಸರಿಯುವುದಿಲ್ಲ. ಕಷ್ಟದ ಸಮಯದಲ್ಲೂ ಸರ್ಕಾರದಿಂದ 2300 ಕೋಟಿ ರೂ. ಸಂಬಳ ಕೊಡಲಾಗಿದ್ದು, ಅಗತ್ಯ ಸಹಕಾರವನ್ನೂ ನೀಡಲಾಗಿದೆ. ಯಾವನದ್ದೋ ಮಾತು ಕೇಳಿಕೊಂಡು ಮುಷ್ಕರ ಮಾಡುತ್ತಿರುವುದು ಸರಿಯಲ್ಲ ಎಂದು ಪರೋಕ್ಷವಾಗಿ ಕೋಡಿಹಳ್ಳಿ ಚಂದ್ರಶೇಖರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.